ಕರ್ನಾಟಕ ಸರ್ಕಾರ

ಸಂಖ್ಯೆ: ಉನಿಕಾ/ಮಮಅಇ/ಐಸಿಡಿ/ಅಂಕಾ/ಅಂಸ/ಆನ್‌ಲೈನ್/ಅರ್ಜಿ/21-22

ಉಪನಿರ್ದೇಶಕರ ಕಚೇರಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಕಾರವಾರ, ದಿನಾಂಕ: 06-09-2021

ವಿಷಯ: ಉತ್ತರ ಕನ್ನಡ ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಅಂಗನವಾಡಿ ಸಹಾಯಕಿಯರ ಹುದ್ದೆಯನ್ನು ಭರ್ತಿ ಮಾಡಲು ಅರ್ಜಿಯನ್ನು ಅಹ್ವಾನಿಸುವ ಬಗ್ಗೆ.

ಉಲ್ಲೇಖ: 1] ಸರಕಾರಿ ಆದೇಶ ಸಂಖ್ಯೆ: ಮಮಇ/303/ಐಸಿಡಿ/2017, ದಿನಾಂಕ: 23-09-2017

2] ಆಯ್ಕೆ ಸಮಿತಿಯ ಅಧ್ಯಕ್ಷರಾದ ಮಾನ್ಯ ಜಿಲ್ಲಾಧಿಕಾರಿಗಳ ಅನುಮೋದನೆ ಕಂಡಿಕೆ ಸಂಖ್ಯೆ: 44

-----

ಉತ್ತರ ಕನ್ನಡ ಜಿಲ್ಲೆಯ 11 ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಈ ಕೆಳಗೆ ಕಾಣಿಸಲಾದ ಗ್ರಾಮಗಳ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಿಗೆ ಕಾರ್ಯಕರ್ತೆ ಹಾಗೂ ಸಹಾಯಕಿಯಾಗಿ ಗೌರವಸೇವೆ ಸಲ್ಲಿಸಲು ಈ ಕೆಳಗೆ ತೋರಿಸಲಾದ ಮೀಸಲಾತಿ ಹೊಂದಿದ 18 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ (ಅದೇ ಗ್ರಾಮದ) ಮಹಿಳಾ ಅಭ್ಯರ್ಥಿಗಳಿಂದ ಮಾತ್ರ ಈ ಕೆಳಗೆ ತೋರಿಸಲಾದ ನಮೂನೆಯಲ್ಲಿ ಅರ್ಜಿ ಅಹ್ವಾನಿಸಲಾಗಿದೆ. ಅಂಗನವಾಡಿ ಕಾರ್ಯಕರ್ತೆಯಾಗಲು ಎಸ್.ಎಸ್.ಎಲ್.ಸಿ. ತೇರ್ಗಡೆಯಾಗಿರಬೇಕು. ಅಂಗನವಾಡಿ ಸಹಾಯಕಿಯಾಗಲು ಕನಿಷ್ಠ 4 ನೇ ತರಗತಿ ತೇರ್ಗಡೆಯಾಗಿದ್ದು ಗರಿಷ್ಠ ವಿದ್ಯಾರ್ಹತೆ 9 ನೇ ತರಗತಿ ತೇರ್ಗಡೆಯಾಗಿರಬೇಕು. ಈ ಕೆಳಗೆ ತೋರಿಸಲಾದ ಎಲ್ಲಾ ದಾಖಲೆಗಳೊಂದಿಗೆ ಸಂಬಂಧಿತರು ದಿನಾಂಕ: 09-09-2021 ರಿಂದ 14-10-2021 ರವರೆಗೆ ಆನ್‌ಲೈನ್‌ನಲ್ಲಿ (WEBSITE- **http://anganwadirecruit.kar.nic.in**) ಅರ್ಜಿ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಆಯಾಯ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಸಂಪರ್ಕಿಸಲು ಕೋರಿದೆ.

ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು:

1. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಎಸ್.ಎಸ್.ಎಲ್.ಸಿ. ಅಂಕಪಟ್ಟಿ
2. ತಹಶೀಲ್ದಾರರು/ ಉಪತಹಶೀಲ್ದಾರರಿಂದ ಪಡೆದ 3 ವರ್ಷದೊಳಗಿನ ವಾಸಸ್ಥಳ ದೃಢೀಕರಣ ಪತ್ರ
3. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಕಾರ್ಯಕರ್ತೆ ಹುದ್ದೆಗೆ ಎಸ್.ಎಸ್.ಎಲ್.ಸಿ. ಉತ್ತೀರ್ಣದ ಬಗ್ಗೆ ಅಂಕಪಟ್ಟಿ ಸಲ್ಲಿಸುವುದು)
4. ವಿದ್ಯಾರ್ಹತೆ ಬಗ್ಗೆ ಪ್ರಮಾಣ ಪತ್ರ (ಸಹಾಯಕಿ ಹುದ್ದೆಗೆ 4 ನೇ ತರಗತಿ ತೇರ್ಗಡೆ, ಗರಿಷ್ಠ 9 ನೇ ತರಗತಿ ತೇರ್ಗಡೆ 9 ನೇ ತರಗತಿಗಿಂತ ಹೆಚ್ಚಿನ ವಿದ್ಯಾರ್ಹತೆಯನ್ನು ಆಯ್ಕೆಗೆ ಪರಿಗಣಿಸುವುದಿಲ್ಲ)
5. ಮೀಸಲಾತಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ (ಮೀಸಲಾತಿ ಅಂಗನವಾಡಿ ಕೇಂದ್ರಗಳಿಗೆ ಮಾತ್ರ ಅನ್ವಯ)
6. ಪತಿಯ ಮರಣ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸುವುದು. (ವಿಧವಾ ವೇತನದ ಪ್ರಮಾಣ ಪತ್ರ ಇತರೇ ದೃಢೀಕರಣವನ್ನು ಪರಿಗಣಿಸುವುದಿಲ್ಲ)
7. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪವಿಭಾಗಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
8. ಅಂಗವಿಕಲತೆ ಪ್ರಮಾಣ ಪತ್ರ (ದೈಹಿಕ ಅಂಗವಿಕಲತೆ ಶೇ.60 ಕ್ಕಿಂತ ಕಡಿಮೆ ಇದ್ದಲ್ಲಿ ಮಾತ್ರ) (ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಸಲ್ಲಿಸುವವರಿಗೆ ಮಾತ್ರ) ಅಂಗವಿಕಲ ವೇತನದ ದೃಢೀಕರಣವನ್ನು ಪರಿಗಣಿಸುವುದಿಲ್ಲ)
9. ವಿಚ್ಛೇದನ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)
10. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಮಗದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ಪ್ರಮಾಣ ಪತ್ರ
11. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ
12. ಇಲಾಖೆಯ ಸುಧಾರಣಾ ಸಂಸ್ಥೆ/ ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
13. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ
14. ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿ ಆಗಿದ್ದಲ್ಲಿ, ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ಆಯ್ಕೆಯಾದಲ್ಲಿ ಸದಸ್ಯತ್ವಕ್ಕೆ ರಾಜೀನಾಮೆ ನೀಡಬೇಕಿರುತ್ತದೆ.

ವಿಶೇಷ ಸೂಚನೆ: ಅರ್ಜಿಗಳನ್ನು ಕಂಪ್ಯೂಟರ್/ಸೈಬರ್ ಕೇಂದ್ರಗಳಲ್ಲಿ ಅಳವಡಿಸಿದ ಬಳಿಕ ನೀವು ಹಾಕಿದ ದಾಖಲೆಗಳೆಲ್ಲವು ದಾಖಲಾಗಿದೆಯೇ ಎಂಬ ಬಗ್ಗೆ ಪ್ರತಿಗಳನ್ನು ನಿಮ್ಮ ಪರಿಶೀಲನೆಗೆ ಪಡೆದಿಟ್ಟುಕೊಳ್ಳಿ. ಅಂಚೆ ಕಛೇರಿಯಿಂದ ಮತ್ತು ಮುದ್ದಾಂ ಮೂಲಕ ಕಚೇರಿಗೆ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಉಪನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಕಾರವಾರ